# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **613** |
| ಸದಸ್ಯರ ಹೆಸರು | : | **ಶ್ರೀ. ರಘುನಾಥರಾವ್ ಮಲ್ಕಾಪೂರೆ** |
| ಉತ್ತರಿಸುವ ದಿನಾಂಕ | : | **20/02/2024** |
| ಉತ್ತರಿಸುವ ಸಚಿವರು | : | **ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಯಾವ ಹಂತದಲ್ಲಿದೆ (ವಿವರ ನೀಡುವುದು); | ಜಿಲ್ಲಾಧಿಕಾರಿ, ಬೀದರ ಜಿಲ್ಲೆ ರವರು ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವುದಕ್ಕಾಗಿ ಅಗತ್ಯ ಮಾಹಿತಿ ಮತ್ತು ದಾಖಲೆಗಳೊಂದಿಗೆ ಸಲ್ಲಿಸಿರುವ ಪ್ರಸ್ತಾವನೆಯು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರನ್ವಯ ನಿಯಮಾನುಸಾರ ಪರಿಶೀಲನೆಯಲ್ಲಿರುತ್ತದೆ. |
| ಆ | ಈ ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ರೂಪುರೇಷೆಗಳೇನು (ಸಂಪೂರ್ಣ ಮಾಹಿತಿ ಒದಗಿಸುವುದು; | ಬೀದರ್ ನಗರಸಭೆಯೇ ಅಲ್ಲದೇ ಯಾವುದೇ ಒಂದು ಸ್ಥಳೀಯ ಸಂಸ್ಥೆಯನ್ನು ಮಹಾನಗರಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ಸೆಕ್ಷನ್-3 ರಲ್ಲಿರುವಂತೆ ನಿಕಟಪೂರ್ವ ಜನಗಣತಿಯ ಮಾಹಿತಿಯನ್ವಯ, ಈ ಕೆಳಕಂಡ ಮಾನದಂಡವನ್ನು ಅನುಸರಿಸಲಾಗುತ್ತದೆ:<br>1. ಅಂತಹ ಪ್ರದೇಶದ ಜನಸಂಖ್ಯೆ ಮೂರು ಲಕ್ಷಕ್ಕಿಂತ ಕಡಿಮೆ ಇಲ್ಲದ ಜನಸಂಖ್ಯೆಯನ್ನೊಳಗೊಂಡಿರಬೇಕು;<br>2. ಅಂಥ ಪ್ರದೇಶದಲ್ಲಿನ ಜನಸಾಂದ್ರತೆಯು ಒಂದು ಚದರ ಕಿಲೋಮೀಟರ್ ವಿಸ್ತೀರ್ಣದಲ್ಲಿ ಮೂರು ಸಾವಿರಕ್ಕಿಂತ ಕಡಿಮೆ ಇಲ್ಲದ ನಿವಾಸಿಗಳು ಇರಬೇಕು;<br>3. ಸ್ಥಳೀಯ ಆಡಳಿತಕ್ಕಾಗಿ ಅಂಥ ಪ್ರದೇಶದಿಂದ ಆದಾಯ ಉತ್ಪಾದನೆಯು ವಾರ್ಷಿಕ ಆರು ಕೋಟಿ ರೂಪಾಯಿಗಳಿಗಿಂತ ಕಡಿಮೆ ಇಲ್ಲದಷ್ಟು ಅಥವಾ ವಾರ್ಷಿಕ ತಲಾವಾರು ಎರಡು ನೂರು ರೂಪಾಯಿಗಳ ದರದಂತೆ ಲೆಕ್ಕ ಹಾಕಿದ ಮೊಬಲಗು ಇವೆರಡರಲ್ಲಿ ಯಾವುದು ಅಧಿಕವೋ ಅಷ್ಟು ಇರಬೇಕು;<br>4. ಕೃಷಿಯೇತರ ಚಟುವಟಿಕೆಗಳಲ್ಲಿ ತೊಡಗಿರುವ ಉದ್ಯೋಗಿಗಳ ಶೇಕಡಾವಾರು ಸಂಖ್ಯೆಯು ಒಟ್ಟು ಉದ್ಯೋಗಿಗಳಲ್ಲಿ 50% ಕ್ಕಿಂತ ಕಡಿಮೆಯಾಗಿರಕೂಡದು; |

| | | |
|---|---|---|
| ಇ | ಈ ನಗರಸಭೆಯ ವ್ಯಾಪ್ತಿಯಿಂದ ಹೊರಗಿರುವ ಯಾವ ಯಾವ ಗ್ರಾಮಗಳನ್ನು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ತರಲಾಗುವುದು; (ವಿವರ ನೀಡುವುದು) | ಉದ್ದೇಶಿತ ಬೀದರ್ ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಯಾವ ಯಾವ ಗ್ರಾಮಗಳನ್ನು ಸೇರ್ಪಡೆಗೊಳಿಸಬೇಕೆಂಬ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಈ | ಯಾವ ಕಾಲಮಿತಿಯಲ್ಲಿ ಮಹಾನಗರಪಾಲಿಕೆಯಾಗಿ ಅಸ್ತಿತ್ವಕ್ಕೆ ಬರಲಿದೆ? (ಸ್ಪಷ್ಟ ಮಾಹಿತಿ ಒದಗಿಸುವುದು) | ಅನ್ವಯಿಸುವುದಿಲ್ಲ. |

**ಸಂಖ್ಯೆ:ನಅಇ 09 ಎಲ್‌ಸಿಕ್ಯೂ 2024.**

21/02/2024

**(ಬಿ ಎಸ್ ಸುರೇಶ್)**

**ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು**